# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 09-03-2021 ಪ್ರಶ್ನೆ ಸಂಖ್ಯೆ : 703(873)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಪ್ರತಾಪ್ರಚಂದ್ರ ಶೆಟ್ಟಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 09-03-2021

ಉತ್ತರಿಸುವ ಸಚಿವರು: ಮಾನ್ಯ ಸಹಕಾರ ಸಚಿವರು

ವಿಷಯ : ದಕ್ಷಿಣ ಕನ್ನಡ ಕೇಂದ್ರ ಸಹಕಾರಿ ಬ್ಯಾಂಕ್ ನಿ., ಮಂಗಳೂರು 2017-18 ನೇ ಸಾಲಿನಲ್ಲಿ ಕೈಗೊಂಡ ನೇಮಕಾತಿ ಕುರಿತು

(ಅ) ದಕ್ಷಿಣ ಕನ್ನಡ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ನಿ., ಮಂಗಳೂರು ಇವರು 2017-18 ನೇ ಸಾಲಿನಲ್ಲಿ ಕೈಗೊಂಡ ನೇರ ನೇಮಕಾತಿ ಸಂದರ್ಭದಲ್ಲಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಕೆಗಾಗಿ ದುಬಾರಿ ಅರ್ಜಿ ಶುಲ್ಕ ವಿಧಿಸಿದ್ದು, ಇದರಿಂದ ಬಡ ಉದ್ಯೋಗಾಕಾಂಕ್ಷಿಗಳಿಗೆ ಹೊರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅರ್ಜಿ ಶುಲ್ಕ ನಿಗದಿಪಡಿಸುವ ಬಗ್ಗೆ ಸರ್ಕಾರದ ಮಾರ್ಗಸೂಚಿ ಯಾವುವು; (ಮಾರ್ಗಸೂಚಿ ಪ್ರತಿ ಒದಗಿಸುವುದು)

(ಆ) ಎಫ್.ಸಿ.ಡಿ.ಸಿ.ಸಿ., ಬ್ಯಾಂಕ್, ಮಂಗಳೂರು ಇವರ ಕಾರ್ಯಕ್ಷೇತ್ರದ ಹೊರಗೆ ಇರುವ ಜಿಲ್ಲೆ ಹಾಗೂ ಹೊರ ರಾಜ್ಯಗಳ ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳಲು ಸರ್ಕಾರದ ಮಾರ್ಗಸೂಚಿ ಪ್ರಕಾರ ಅವಕಾಶ ಇದೆಯೇ; ಅವಕಾಶ ಇದ್ದಲ್ಲಿ, ಸರ್ಕಾರದ ಮಾರ್ಗಸೂಚಿ/ಸುತ್ತೋಲೆ ಒದಗಿಸುವುದು; ಇಲ್ಲವಾದಲ್ಲಿ, ನಿಯಮವನ್ನು ಉಲ್ಲಂಘಿಸಿ ನೇಮಕಾತಿ ಮಾಡಿಕೊಂಡಿರುವ ಕುರಿತು ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದೇ;

(ಇ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಮೀಸಲಾಗಿರುವ ಹುದ್ದೆಗಳನ್ನು ಹಾಗೂ ಮಾಜಿ ಸೈನಿಕರಿಗೆ ಮೀಸಲಾಗಿರುವ ಹುದ್ದೆಗಳನ್ನು ಸಾಮಾನ್ಯ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಂದ ಭರ್ತಿ ಮಾಡಿಕೊಳ್ಳಲು ನಿಯಮಾವಳಿ ಪ್ರಕಾರ ಅವಕಾಶ ಇದೆಯೇ;ಈ ರೀತಿ ಭರ್ತಿ ಮಾಡಿಕೊಳ್ಳಲು ಸರ್ಕಾರವು ಅನುಮತಿ ನೀಡಿದೆಯೇ ; ಈ ರೀತಿ ಮೀಸಲಾತಿ ನಿಯಮವನ್ನು ಉಲ್ಲಂಘಿಸಿ ನೇಮಕಾತಿ ಮಾಡಿಕೊಂಡಿರುವ ಕುರಿತು ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದೇ?